# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ವಾರ್ಡ್ ಸಂಖ್ಯೆ.29 ಕಾಚರಕನಹಳ್ಳಿಗೆ ಸಂಬಂಧಿಸಿದಂತೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಕುವೆಂಪು ಪಾರ್ಕ್ ಪಕ್ಕದಲ್ಲಿರುವ ಪಾಲಿಕೆ ಕಟ್ಟಡದಲ್ಲಿ ದಿನಾಂಕ: 17-07-2021 ರಂದು ನಡೆದ ವಾರ್ಡ್ ಕಮಿಟಿ ಸಭೆಯ ನಡವಳಿಗಳು

**ಹಾಜರಿದ್ದ ಸದಸ್ಯರು,**

1. ಶ್ರೀ ಪ್ರಸನ್ನಕುಮಾರ್ ಪ್ರವೀಣ್ ಎ, ಅಧ್ಯಕ್ಷರು, ವಾರ್ಡ್ ಸಮಿತಿ ನೋಡೆಲ್ ಅಧಿಕಾರಿಗಳು,
2. ಶ್ರೀ.ಹೆಚ್.ವಿ.ಕೃಷ್ಣಾರೆಡ್ಡಿ, ಸದಸ್ಯ ಕಾರ್ಯದರ್ಶಿ ಮತ್ತು ಸಂಚಾಲಕರು,
3. ಡಾ॥ ವಸುಂಧರಾ, ವೈದ್ಯಾಧಿಕಾರಿಗಳ ಕಛೇರಿ ವಾರ್ಡ್ ಸಂಖ್ಯೆ.29.
4. ಶ್ರೀ.ಹನುಮಂತಪ್ಪ, ಹಿರಿಯ ಆರೋಗ್ಯ ನಿರೀಕ್ಷಕರು ಹಾಗೂ ಸದಸ್ಯರು,
5. ಶ್ರೀ ಪಿಳ್ಳಪ್ಪ (ಅಧ್ಯಕ್ಷರು, ರಾಮಯ್ಯ ಬಡಾವಣೆ ನಿವಾಸಿಗಳ ಸಂಘ),
6. ಶ್ರೀಮತಿ ವಿನುತ, ಪದಾಧಿಕಾರಿಗಳು, ಹೆಚ್.ಆರ್.ಬಿ.ಆರ್, 3ನೇ ಹಂತ ಬಿಡಿಎ ಬಡಾವಣೆ ಅಸೋಸಿಯೇಷನ್(ರಿ)
7. ಶ್ರೀ ಪ್ರಸನ್ನ, ಸದಸ್ಯರು, ಹೆಚ್.ಬಿ.ಆರ್ ಬಡಾವಣೆ ಅಸೋಸಿಯೇಷನ್(ರಿ)

**ಹಾಜರಿದ್ದ ಅಧಿಕಾರಿಗಳು**

1. ಶ್ರೀ ರಾಜಶೇಖರ್, ಕಂದಾಯ ನಿರೀಕ್ಷಕರು,
2. ಶ್ರೀ ರಾಜೇಶ್, ಕಿರಿಯ ಆರೋಗ್ಯ ನಿರೀಕ್ಷಕರು,
3. ಬಿಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ ಸೂಪರ್‌ವೈಸರ್
4. ಮಾರ್ಷಲ್, ವಾರ್ಡ್ ಸಂಖ್ಯೆ.29, ಕಾಚರಕನಹಳ್ಳಿ,
5. ಸಹಾಯಕ ಸಬ್ ಇನ್ಸ್‌ಪೆಕ್ಟರ್ (ಕಾನೂನು ಮತ್ತು ಸುವ್ಯವಸ್ಥೆ) ಬಾಣಸವಾಡಿ ಪೊಲೀಸ್ ಠಾಣೆ,
6. ಸಬ್ ಇನ್ಸ್‌ಪೆಕ್ಟರ್ (ಸಂಚಾರ) ಬಾಣಸವಾಡಿ ಪೊಲೀಸ್ ಠಾಣೆ,
7. ಶ್ರೀಮತಿ ರಾಜೇಶ್ವರಿ, ಕಲ್ಯಾಣ ಇಲಾಖೆ,
8. ಕಿರಿಯ/ಸಹಾಯಕ ಅಭಿಯಂತರರು, ಬೆಸ್ಕಾಂ ಇಲಾಖೆ,

ವಾರ್ಡ್ ಸಮಿತಿಯ ಪ್ರಾಸ್ತಾವಿಕ ಸಭೆಯ ಉದ್ದೇಶವನ್ನು ತಿಳಿಸಿ, ಸಭೆಯಲ್ಲಿ ಉಪಸ್ಥಿತರಿದ್ದ ಅಧ್ಯಕ್ಷರು ಸದಸ್ಯರು ಹಾಗೂ ಎಲ್ಲಾ ಅಧಿಕಾರಿಗಳನ್ನು ಸ್ವಾಗತಿಸಿ ಸಭೆಯನ್ನು ನಡೆಸಲು ವಾರ್ಡ್ ಸಮಿತಿ ಅಧ್ಯಕ್ಷರನ್ನು ಕೋರಲಾಯಿತು.

**ಸಭೆಯ ನಡವಳಿಗಳು**

1) **ಶ್ರೀ ಪಿಳ್ಳಪ್ಪ (ಅಧ್ಯಕ್ಷರು, ರಾಮಯ್ಯ ಬಡಾವಣೆ ನಿವಾಸಿಗಳ ಸಂಘ) ರವರು ಮಾತನಾಡಿ,** ವಾರ್ಡ್ ಪ್ರದೇಶದಲ್ಲಿ ಇತ್ತೀಚೆಗೆ ಕಾವೇರಿ ನೀರು ಸರಬರಾಜು ಸಮರ್ಪಕವಾಗಿ ಸರಬರಾಜಾಗುತ್ತಿದ್ದು, ನೀರು ಸರಬರಾಜಿನಲ್ಲಿ ಯಾವುದೇ ವ್ಯತ್ಯಯ ಇರುವುದಿಲ್ಲ ಎಂದು ಸಭೆಗೆ ತಿಳಿಸಿ, ನಂತರ ನೀರು ಸರಬರಾಜು ಮಾಸಿಕ ಬಿಲ್ಲು 2–3 ಪಟ್ಟು ಜಾಸ್ತಿ ಬರುತ್ತಿದ್ದು, ಈ ಬಗ್ಗೆ ಚರ್ಚಿಸಲು ಸಭಾ ಗಮನಕ್ಕೆ ತಂದಾಗ ಸಭೆಯಲ್ಲಿ ನೀರು ಸರಬರಾಜು ಅಭಿಯಂತರರು ಗೈರು ಹಾಜರಾಗಿದ್ದರಿಂದ ಮುಂದಿನ ಸಭೆಯಲ್ಲಿ ಚರ್ಚಿಸಲು ಸಭೆಯು ಸರ್ವಾನುಮತದಿಂದ ಆದೇಶಿಸಿತು.

2) **ಶ್ರೀಮತಿ ವಿನುತ, ಪದಾಧಿಕಾರಿಗಳು, ಹೆಚ್.ಆರ್.ಬಿ.ಆರ್, 3ನೇ ಹಂತ ಬಿಡಿಎ ಬಡಾವಣೆ ಅಸೋಸಿಯೇಷನ್(ರಿ) ರವರು** ಮಾತನಾಡಿ, ಬಿಡಿಎ ಬಡಾವಣೆಯಲ್ಲಿ ಸೆಗ್ರಿಗೇಷನ್, ಕಲೆಕ್ಷನ್ ಮತ್ತು ವಿಲೇವಾರಿ ಸಮರ್ಪಕವಾಗಿ ನಡೆಯುತ್ತಿದ್ದು, ರಸ್ತೆ ಗುಡಿಸುವುದು ಸಮರ್ಪಕವಾಗಿ

ನಡೆಯುತ್ತಿರುವುದಿಲ್ಲ ಎಂದು ಸಭಾ ಗಮನಕ್ಕೆ ತಂದಾಗ ಈ ಬಗ್ಗೆ ಸಭೆಯಲ್ಲಿ ಕೂಲಂಕುಷವಾಗಿ ಚರ್ಚಿಸಿ, ಬಿಡಿಎ ಬಡಾವಣೆಯ ಎಲ್ಲಾ ರಸ್ತೆಗಳಲ್ಲಿ ಸಮರ್ಪಕವಾಗಿ ರಸ್ತೆ ಗುಡಿಸುವಿಕೆಯನ್ನು ಕೈಗೊಳ್ಳಲು ಸಭೆಯಲ್ಲಿ ಹಾಜರಿದ್ದ ಹಿರಿಯ ಆರೋಗ್ಯ ನಿರೀಕ್ಷಕರಿಗೆ ಸಭೆಯು ಸರ್ವಾನುಮತದಿಂದ ಆದೇಶಿಸಿತು.

3) <u>ಶ್ರೀ ಪ್ರಸನ್ನ, ಸದಸ್ಯರು, ಹೆಚ್.ಬಿ.ಆರ್ ಬಡಾವಣೆ ಅಸೋಸಿಯೇಷನ್(ರಿ) ರವರು ಮಾತನಾಡಿ,</u> ವಾರ್ಡಿನ ಹೆಚ್.ಬಿ.ಆರ್ ಬಡಾವಣೆ, 1ನೇ ಹಂತದಲ್ಲಿ ಪದೇ ಪದೇ ವಿದ್ಯುತ್ ನಿಲುಗಡೆ ಆಗುತ್ತಿದ್ದು, ಸಾರ್ವಜನಿಕರಿಗೆ ತೊಂದರೆಯಾಗುತ್ತಿರುತ್ತದೆ ಎಂದು ಸಭಾ ಗಮನಕ್ಕೆ ತಂದಾಗ ಸಭೆಯಲ್ಲಿ ಹಾಜರಿದ್ದ ಬೆಸ್ಕಾಂ ಅಭಿಯಂತರರು ಮಾತನಾಡಿ ಸದರಿ ಪ್ರದೇಶದಲ್ಲಿ ವಿದ್ಯುತ್ ಭೂಗತ ಕೇಬಲ್‌ಗಳನ್ನು ಅಳವಡಿಸಲಾಗುತ್ತಿರುವುದರಿಂದ ಆಗಾಗ್ಗೆ ವಿದ್ಯುತ್ ನಿಲುಗಡೆ ಮಾಡಬೇಕಾಗಿರುತ್ತದೆ, ವಿದ್ಯುತ್ ಭೂಗತ ಕೇಬಲ್‌ಗಳನ್ನು ಅಳವಡಿಸುವ ಕಾಮಗಾರಿ ಪೂರ್ಣಗೊಂಡ ನಂತರ ನಿರಂತರವಾಗಿ ವಿದ್ಯುತ್ ಸರಬರಾಜು ಮಾಡಲಾಗುವುದು ಎಂದು ಸಭೆಗೆ ತಿಳಿಸಿದರು.

4) <u>ಶ್ರೀ ಪಿಳ್ಳಪ್ಪ (ಅಧ್ಯಕ್ಷರು, ರಾಮಯ್ಯ ಬಡಾವಣೆ ನಿವಾಸಿಗಳ ಸಂಘ) ರವರು ಮಾತನಾಡಿ,</u> ವಾರ್ಡ್ ವ್ಯಾಪ್ತಿಯಲ್ಲಿ ವಿದ್ಯುತ್ ದೀಪಗಳು ದುರಸ್ತಿಯಲ್ಲಿರುತ್ತವೆ ಮತ್ತು ಹಲವು ಕಂಬಗಳಿಗೆ ವಿದ್ಯುತ್ ದೀಪದ ಫಿಟ್ಟಿಂಗ್ಸ್‌ಗಳನ್ನು ಅಳವಡಿಸಬೇಕಾಗಿರುತ್ತದೆ ಎಂದು ಸಭಾ ಗಮನಕ್ಕೆ ತಂದಾಗ ಸಭೆಯಲ್ಲಿ ಕೂಲಂಕುಷವಾಗಿ ಚರ್ಚಿಸಿ, ವಿದ್ಯುತ್ ದೀಪಗಳ ವಿಭಾಗದ ಅಧಿಕಾರಿಗಳು ವಾರ್ಡ್ ಸಮಿತಿ ಸಭೆಗಳಿಗೆ ನಿರಂತರವಾಗಿ ಗೈರು ಹಾಜರಾಗುತ್ತಿದ್ದು, ಸದರಿಯವರ ವಿರುದ್ಧ ಕ್ರಮ ಕೈಗೊಳ್ಳಲು ಮೇಲಾಧಿಕಾರಿಗಳಿಗೆ ಪತ್ರ ಬರೆಯಲು ಸಭೆಯು ಸರ್ವಾನುಮತದಿಂದ ಆದೇಶಿಸಿತು.

5) <u>ಡಾ॥ ವಸುಂಧರಾ, ವೈದ್ಯಾಧಿಕಾರಿಗಳ ಕಛೇರಿ ವಾರ್ಡ್ ಸಂಖ್ಯೆ.29 ರವರು</u> ಮಾತನಾಡಿ, ಪ್ರಸ್ತುತ ವಾರ್ಡ್ ಪ್ರದೇಶದಲ್ಲಿ ವಾರ್ಡ್ ಕಛೇರಿಯ ಆಸ್ಪತ್ರೆಯಲ್ಲಿ ಕೋವಿಡ್-19 ಪರೀಕ್ಷೆಗಳನ್ನು ಸತತವಾಗಿ ನಡೆಸುತ್ತಿದ್ದು, ಒಟ್ಟು 10 ಸಕ್ರಿಯ ಪ್ರಕರಣಗಳಲ್ಲಿ 10 ಹೋಮ್ ಐಸೋಲೇಷನ್ ಹಾಗೂ ಒಟ್ಟು ಆರ್.ಟಿ.ಪಿ.ಸಿ.ಆರ್ ಪರೀಕ್ಷೆಗೆಗೊಳಪಟ್ಟ ಪ್ರಕರಣಗಳು ಹಾಗೂ ರ್‍ಯಾಪಿಡ್ ಪರೀಕ್ಷೆಗೆ ಒಳಪಟ್ಟವರು 60155, ಒಟ್ಟು ವ್ಯಾಕ್ಸಿನೇಷನ್ 22000 ಜನರಿಗೆ ಲಸಿಕೆ ನೀಡಲಾಗಿರುತ್ತದೆ ಎಂದು ಸಭೆಗೆ ತಿಳಿಸಿದರು.

ಕೊನೆಯದಾಗಿ ಮಾನ್ಯ ಅಧ್ಯಕ್ಷರು ಮಾತನಾಡಿ, ಇಂದಿನ ಸಭೆಯಲ್ಲಿ ಚರ್ಚಿಸಿ ತೀರ್ಮಾನಿಸಿರುವ ಎಲ್ಲಾ ನಿರ್ಣಯಗಳ ಬಗ್ಗೆ ಕೂಡಲೇ ಕ್ರಮ ಕೈಗೊಳ್ಳಲು ಆದೇಶಿಸಿ, ಸಭೆಯನ್ನು ಮುಕ್ತಾಯಗೊಳಿಸಿದರು.

Prasanna Kumar. A

ವಾರ್ಡ್ ಸಮಿತಿ ಸದಸ್ಯ ಕಾರ್ಯದರ್ಶಿಗಳು
ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ.29, ಕಾಚರಕನಹಳ್ಳಿ

ಅಧ್ಯಕ್ಷರು
(ನೋಡೆಲ್ ಅಧಿಕಾರಿಗಳು)
ವಾರ್ಡ್ ಸಂಖ್ಯೆ.29, ಕಾಚರಕನಹಳ್ಳಿ

<u>ಪ್ರತಿಯನ್ನು</u>

1) ಜಂಟಿ ಆಯುಕ್ತರರು (ಪೂರ್ವ) ರವರ ಅವಗಾಹನೆಗಾಗಿ ಸಲ್ಲಿಸಿದೆ.
2) ಮುಖ್ಯ ಅಭಿಯಂತರರು (ಪೂ) ರವರ ಅವಗಾಹನೆಗಾಗಿ ಸಲ್ಲಿಸಿದೆ.
3) ಕಾರ್ಯಪಾಲಕ ಅಭಿಯಂತರರು (ಸರ್ವಜ್ಞನಗರ) ರವರ ಅವಗಾಹನೆಗಾಗಿ.
4) ವಾರ್ಡ್ ಕಮಿಟಿಯ ಸದಸ್ಯರಿಗೆ.
5) ಕಛೇರಿ ಕಡತಕ್ಕೆ.